ಬೆಂಗಳೂರಿನ ಕೆ.ಸಿ. ಜನರಲ್ ಆಸ್ಪತ್ರೆಯಲ್ಲಿನ ವೈದ್ಯಾಧಿಕಾರಿಗಳ ಬಗ್ಗೆ

೪೮. ಶ್ರೀ ಕೆ. ಲಕ್ಕಣ್ಣ (ರಾಜಾಜಿನಗರ).—ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಂಗಳೂರಿನ ಕೆ.ಸಿ. ಜನರಲ್ ಆಸ್ಪತ್ರೆಯಲ್ಲಿನ ವಿವಿಧ ಭಾಗಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು ? ಈ ಆಸ್ಪತ್ರೆಗೆ ಮಂಜೂರಾಗಿರುವ ವೈದ್ಯಾಧಿಕಾರಿಗಳ ಹುದ್ದೆ ಎಷ್ಟು ?

ಆ) ಎಲ್ಲಾ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲಾಗಿದೆಯೇ ?

ಶ್ರೀಮತಿ ಮನೋರಮ ಮಧ್ವರಾಜ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು).—

ಅ) ೧) ಶಸ್ತ್ರಚಿಕಿತ್ಸಕರು — ೪

೨) ಉಪ ಶಸ್ತ್ರಚಿಕಿತ್ಸಕರು — ೧೦

೩) ಸಹಾಯಕ ಶಸ್ತ್ರಚಿಕಿತ್ಸಕರು — ೧೬

ಒಟ್ಟು :— ೩೦

ಆ) ೧ ಉಪ ಶಸ್ತ್ರಚಿಕಿತ್ಸಕರ ಹುದ್ದೆಯನ್ನು ಬಿಟ್ಟು ಮಿಕ್ಕೆಲ್ಲ ಹುದ್ದೆಗಳನ್ನು ತುಂಬಲಾಗಿದೆ.

ಬೆಂಗಳೂರಿನ ಕೆ. ಸಿ. ಜನರಲ್ ಆಸ್ಪತ್ರೆಯಲ್ಲಿ ಪ್ರತಿ ದಿನ ಬರುತ್ತಿರುವ ಹೊರ ರೋಗಿಗಳ ಸಂಖ್ಯೆಗಳ ಬಗ್ಗೆ

೪೯. ಶ್ರೀ ಕೆ. ಲಕ್ಕಣ್ಣ, (ರಾಜಾಜಿನಗರ).—ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಂಗಳೂರಿನ ಮಲ್ಲೇಶ್ವರದಲ್ಲಿರುವ ಕೆ.ಸಿ. ಜನರಲ್ ಆಸ್ಪತ್ರೆಯಲ್ಲಿ ಪ್ರತಿದಿನ ಬರುತ್ತಿರುವ ಒಳರೋಗಿಗಳ ಮತ್ತು ಹೊರರೋಗಿಗಳ ಸಂಖ್ಯೆ ಎಷ್ಟು ?

ಆ) ರೋಗಿಗಳ ಸಂಖ್ಯೆಗನುಗುಣವಾಗಿ ಹಾಸಿಗೆಗಳ ವ್ಯವಸ್ಥೆ ಇದೆಯೇ, ಇಲ್ಲದಿದ್ದಲ್ಲಿ ಹೆಚ್ಚಿಗೆ ಮಾಡುವ ಆಲೋಚನೆ ಸರ್ಕಾರಕ್ಕಿದೆಯೇ ?

ಇ) ಈ ಆಸ್ಪತ್ರೆಗೆ ಒದಗಿಸುತ್ತಿರುವ ಔಷಧಿಯ ಪ್ರಮಾಣವು ಸಾಲದಿರುವುದು ತಮ್ಮ ಗಮನಕ್ಕೆ ಬಂದಿದೆಯೇ ? ಹಾಗಿದ್ದಲ್ಲಿ ಔಷಧಿ ಪ್ರಮಾಣವನ್ನು ಹೆಚ್ಚಿಸಲು ಕ್ರಮಕೈಗೊಳ್ಳಲಾಗುವುದೇ ?

ಶ್ರೀಮತಿ ಮನೋರಮ ಮಧ್ವರಾಜ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು).—

ಅ) ಪ್ರತಿದಿನ ಬರುವ ಒಳ ರೋಗಿಗಳು — ೪೬

ಪ್ರತಿದಿನ ಬರುವ ಹೊರ ರೋಗಿಗಳು — ೭೦೦–೮೦೦

ಆ) ಹೌದು ಸಧ್ಯಕ್ಕೆ ಹಾಸಿಗೆಗಳನ್ನು ಹೆಚ್ಚಿಸುವ ಆಲೋಚನೆ ಇಲ್ಲ.

ಇ) ಸ್ವಲ್ಪ ಮಟ್ಟಿಗೆ ಹೌದು ಇದಕ್ಕೆ ಬೇಕಾದ ಹೆಚ್ಚಿನ ಹಣ ಒದಗಿಸಲಾಗುತ್ತಿದೆ.

ಕೃಷ್ಣರಾಜಪುರಂ ಸರ್ಕಾರಿ ಆಸ್ಪತ್ರೆಯನ್ನು ಮೇಲ್ದರ್ಜೆ ಗೇರಿಸುವುದರ ಕುರಿತಂ

೯೪. ಶ್ರೀ ಎಂ. ಕೃಷ್ಣಪ್ಪ (ವರ್ತೂರು).—ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಂಗಳೂರು ನಗರ ಜಿಲ್ಲೆಯ ಕೃಷ್ಣರಾಜಪುರಂ ಸರ್ಕಾರಿ ಆಸ್ಪತ್ರೆಯನ್ನು ಅಪ್‌ಗ್ರೇಡ್ ಮಾಡುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?